ವಿಷಯ: ಕರ್ನಾಟಕ ಗೃಹ ಮಂಡಳಿ ಸಾರ್ವಜನಿಕ ಉದ್ದಿಮೆಗಳ ನೌಕರರಿಗೆ ಮನೆ ಕಟ್ಟುವ ಬಗ್ಗೆ.

1120 (1652)

ಶ್ರೀಮತಿ ಡಿ.ಜಿ.ಹೇಮಾವತಿ, (ಶಾಂತಿನಗರ): ಮಾನ್ಯ ವಸತಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕರ್ನಾಟಕ ಗೃಹ ಮಂಡಳಿಯು ಸಾರ್ವಜನಿಕ ಉದ್ದಿಮೆಗಳ ನೌಕರರಿಗೆ ಮನೆಗಳನ್ನು ಸಂಬಂಧಪಟ್ಟ ಉದ್ದಿಮೆಗಳ ಬಳಿ ಇರುವ ಜಮೀನಿನಲ್ಲಿ ಕಟ್ಟುವ ಬಗ್ಗೆ ಯಾವುದಾದರೂ ಪ್ರಸ್ತಾಪವಿದೆಯೇ?

ಆ) ಹಾಗಿದ್ದರೆ ಅದರ ಮಾಹಿತಿ ನೀಡುವುದು?

ಶ್ರೀ ಹೆಚ್.ಡಿ.ರೇವಣ್ಣ (ವಸತಿ ಸಚಿವರು):

ಅ) ಇಲ್ಲ.

ಆ) ಉದ್ಭವಿಸುವುದಿಲ್ಲ.

ವಿಷಯ: ಸುರತ್ಕಲ್‌ನಿಂದ ಬೆಂಗಳೂರಿಗೆ ಕೆ.ಎಸ್.ಆರ್.ಟಿ.ಸಿ ಬಸ್ ವ್ಯವಸ್ಥೆ.

1121 (1384)

ಶ್ರೀ ಕುಂಬ್ಳೆ ಸುಂದರ್‌ರಾವ್ (ಸುರತ್ಕಲ್): ಮಾನ್ಯ ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಸುರತ್ಕಲ್ ನಗರದಿಂದ ಬೆಂಗಳೂರಿಗೆ ಕರ್ನಾಟಕ ರಾಜ್ಯ ಸಾರಿಗೆ ಸಂಸ್ಥೆಯ ಬಸ್ಸು ಹೊರಡಿಸಬೇಕೆಂಬ ಬೇಡಿಕೆಯು ಸರಕಾರದ ಮುಂದೆ ಇದೆಯೇ; ಹಾಗಿದ್ದಲ್ಲಿ ಅದನ್ನು ಯಾವಾಗ ಕಾರ್ಯಗತಗೊಳಿಸಲಾಗುವುದು?

ಆ) ಸುರತ್ಕಲ್ ಹಾದು ಹೋಗುವ ರಾಜ್ಯ ಸಾರಿಗೆ ಸಂಸ್ಥೆಯ ಬಸ್ಸುಗಳಿಗೆ ನಿಲುಗಡೆ ಘೋಷಿಸಿದ್ದರೂ ಇನ್ನೂ ಸಹ ಕಾರ್ಯರೂಪಕ್ಕೆ ಬಂದಿಲ್ಲ ಎಂಬುದು ನಿಜವಲ್ಲವೆ; ನಿಜವಾಗಿದ್ದಲ್ಲಿ ಸುರತ್‌ಕಲ್‌ಗೆ ನಿಲುಗಡೆ ಮತ್ತು ದರಘಟ್ಟ (ಸ್ಟೇಜ್) ನಿಗದಿ ಮಾಡಿ ಪ್ರಯಾಣಿಕರಿಗೆ ಅನುಕೂಲ ಮಾಡಿ ಕೊಡಲು ಸರ್ಕಾರಕ್ಕೆ ಇರುವ ಅಡಚಣೆಗಳೇನು?

ಶ್ರೀ ಪಿ.ಜಿ.ಆರ್.ಸಿಂಧ್ಯ (ಸಾರಿಗೆ ಸಚಿವರು):

ಅ) ಇಲ್ಲ.

ಆ) ಸುರತ್ಕಲ್ ಹಾದುಹೋಗುವ ಎಲ್ಲಾ ಸಾರಿಗೆಗಳಿಗೆ ಸೂರತ್ಕಲ್ಲಿನಲ್ಲಿ ನಿಂತು-ಪ್ರಯಾಣಿಕರನ್ನು ಹತ್ತಿಸಿಕೊಂಡು ಇಲ್ಲವೇ ಇಳಿಸಿ ಆಚರಣೆಗೊಳಿಸುವ ನಿಟ್ಟಿನಲ್ಲಿ ಅಗತ್ಯ ಕ್ರಮ ಕೈಗೊಳ್ಳಲಾಗಿದೆ.

ವಿಷಯ: ಉತ್ತರ ಕನ್ನಡ ಜಿಲ್ಲೆಯಲ್ಲಿ ಆರಾಧನಾ ಸಮಿತಿ ರಚನೆ

1122 (1574)

ಶ್ರೀ ಡಾ: ಎಂ.ಪಿ.ಕರ್ಕಿ (ಕುಮಟಾ): ಮುಜರಾಯಿ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಉತ್ತರ ಕನ್ನಡ ಜಿಲ್ಲೆಯಲ್ಲಿ ವಿಧಾನಸಭಾ ಕ್ಷೇತ್ರಗಳಿಗೆ ಅನುಗುಣವಾಗಿ ಆರಾಧನಾ ಸಮಿತಿಗಳನ್ನು ಹೊಸದಾಗಿ ರಚಿಸಲಾಗಿದೆಯೇ;

ಆ) ಹಾಗಿಲ್ಲದಿದ್ದಲ್ಲಿ ಯಾವಾಗ ರಚಿಸಲಾಗುವುದು;

ಇ) ಈ ಮೊದಲು ಪರ್ಯಾಯವಾಗಿ ರಚಿಸಿದ ತಾಲ್ಲೂಕು ಮಟ್ಟದ ಸಮಿತಿಯನ್ನು ಊರ್ಜಿತಗೊಳಿಸಲಾಗುವುದೇ ಇಲ್ಲವೆ ಪುನರ್ ರಚಿಸಲಾಗುವುದೇ?

ಶ್ರೀ ಬಿ.ಮುನಿಯಪ್ಪ (ಮುಜರಾಯಿ ಸಚಿವರು):

ಅ) ಹೌದು.

ಆ) ಪ್ರಶ್ನೆ ಉದ್ಭವಿಸುವುದಿಲ್ಲ.

ಇ) ಪ್ರಶ್ನೆ ಉದ್ಭವಿಸುವುದಿಲ್ಲ.

ವಿಷಯ: ಬೆಂಗಳೂರಿನಿಂದ ಗೋಕರ್ಣಕ್ಕೆ ಸಾರಿಗೆ ವ್ಯವಸ್ಥೆ

1123 (1578)

ಡಾ: ಎಂ.ಪಿ.ಕರ್ಕಿ (ಕುಮಟಾ): ಮಾನ್ಯ ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ದೇಶದಲ್ಲಿ ಪ್ರಸಿದ್ಧವಾದ ಗೋಕರ್ಣ ಕ್ಷೇತ್ರಕ್ಕೆ ಬೆಂಗಳೂರಿನಿಂದ ಅಲ್ಟ್ರಾ ಡೀಲಕ್ಸ್ ಬಸ್ಸು ಇಲ್ಲದಿರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೆ;

ಆ) ಹಾಗಿದ್ದಲ್ಲಿ ವ್ಯವಸ್ಥೆ ಮಾಡಲಾಗುವುದೆ?

ಶ್ರೀ ಪಿ.ಜಿ.ಆರ್.ಸಿಂಧ್ಯ (ಸಾರಿಗೆ ಸಚಿವರು):